ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 27–08–2021

# ಮಾಧ್ಯಮ ಪ್ರತಿನಿಧಿಗಳ ಗಮನಕ್ಕೆ

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತದಿಂದ ನೂತನವಾಗಿ ನಿರ್ಮಿಸಲಾಗಿರುವ ಮೈಸೂರು ರಸ್ತೆ ಮೆಟ್ರೋ ನಿಲ್ದಾಣದಿಂದ ಕೆಂಗೇರಿ ಮೆಟ್ರೋ ನಿಲ್ದಾಣದವರೆಗಿನ 7.5 ಕಿ.ಮೀ ಮೆಟ್ರೋ ನೇರಳೆ ಮಾರ್ಗದ ಉದ್ಘಾಟನಾ ಸಮಾರಂಭವನ್ನು ದಿನಾಂಕ: 29–08–2021 ರಂದು ಬೆಳಿಗ್ಗೆ 10.00 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ ಹಾಗೂ ಕೇಂದ್ರ ವಸತಿ ಮತ್ತು ನಗರ ವ್ಯವಹಾರ ಮತ್ತು ಪೆಟ್ರೋಲಿಯಂ ಹಾಗೂ ನೈಸರ್ಗಿಕ ಅನಿಲ ಸಚಿವರಾದ ಹರ್ದೀಪ್ ಸಿಂಗ್ ಪುರಿ ಅವರು ನೆರವೇರಿಸಲಿದ್ದಾರೆ.

ಪ್ರಸ್ತುತ ಕಾರ್ಯಕ್ರಮದ ವರದಿಗಾಗಿ ಅನುವಾಗುವಂತೆ ಸಮಾರಂಭದ ಆಮಂತ್ರಣ ಪತ್ರವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಯಲ್ಲಿ ದಿನಾಂಕ: 28–08–2021 ರ ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆಯವರೆಗೆ ವಿತರಿಸಲಾಗುವುದು. ಕಾರ್ಯಕ್ರಮಕ್ಕೆ ಆಹ್ವಾನ ಪತ್ರಿಕೆ ಹೊಂದಿದವರಿಗೆ ಮಾತ್ರ ಅವಕಾಶವಿರುತ್ತದೆ.

## ಮಾಧ್ಯಮ ಆಹ್ವಾನ
## Media Invitation

**ಮೈಸೂರು ರಸ್ತೆ ಮೆಟ್ರೋ ನಿಲ್ದಾಣದಿಂದ – ಕೆಂಗೇರಿ ಮೆಟ್ರೋ ನಿಲ್ದಾಣದವರೆಗಿನ 7.5 ಕಿ.ಮೀ. ಮೆಟ್ರೋ ನೇರಳೆ ಮಾರ್ಗದ ಉದ್ಘಾಟನಾ ಸಮಾರಂಭ:**

**ಹಸಿರು ನಿಶಾನೆ:**

**ಬಸವರಾಜ ಬೊಮ್ಮಾಯಿ**
ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

**ಹರ್ದೀಪ್ ಸಿಂಗ್ ಪುರಿ**
ಕೇಂದ್ರ ವಸತಿ, ನಗರ ವ್ಯವಹಾರ ಮತ್ತು ಪೆಟ್ರೋಲಿಯಂ ಹಾಗೂ ನೈಸರ್ಗಿಕ ಅನಿಲ ಸಚಿವರು, ಭಾರತ ಸರ್ಕಾರ.

**ಮುಖ್ಯ ಅತಿಥಿಗಳು:**
**ಶ್ರೀಮತಿ ನಿರ್ಮಲಾ ಸೀತಾರಾಮನ್,**
ಕೇಂದ್ರ ಹಣಕಾಸು ಮತ್ತು ಕಾರ್ಪೋರೇಟ್ ವ್ಯವಹಾರಗಳ ಸಚಿವರು, ಭಾರತ ಸರ್ಕಾರ

**ರಾಜೀವ್ ಚಂದ್ರಶೇಖರ್**
ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಎಲೆಕ್ಟ್ರಾನಿಕ್ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು, ಭಾರತ ಸರ್ಕಾರ.

**ಅಧ್ಯಕ್ಷತೆ:**
**ಎಸ್.ಟಿ.ಸೋಮಶೇಖರ್**
**ಸಹಕಾರ ಸಚಿವರು, ಕರ್ನಾಟಕ ಸರ್ಕಾರ.**

**ದಿನಾಂಕ: 29–08–2021, ಭಾನುವಾರ**
**ಹಸಿರು ನಿಶಾನೆ: ನಾಯಂಡಹಳ್ಳಿ ಮೆಟ್ರೋ ನಿಲ್ದಾಣ – ಸಮಯ: ಬೆಳಿಗ್ಗೆ 10.00 ಗಂಟೆಗೆ**
**ಕಾರ್ಯಕ್ರಮ: ಕೆಂಗೇರಿ ಬಸ್ ಟರ್ಮಿನಲ್ ನಿಲ್ದಾಣ – ಸಮಯ: ಬೆಳಿಗ್ಗೆ 10.30 ಗಂಟೆಗೆ**

**ವಿಶೇಷ ಸೂಚನೆ: ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಹೊಂದಿದ ಮಾಧ್ಯಮ ಪ್ರತಿನಿಧಿಗಳಿಗೆ ಮಾತ್ರ ಪ್ರವೇಶ.**

# ಪತ್ರಿಕಾ ಪ್ರಕಟಣೆ

**PRESS RELEASE**

## ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಬಹುಶಿಸ್ತೀಯ ಮಹಿಳಾ ಘಟಕ ಕಾಲೇಜು ಆರಂಭ

ಬೆಂಗಳೂರು, ಆಗಸ್ಟ್ 27 (ಕರ್ನಾಟಕ ವಾರ್ತೆ):

ರಾಷ್ಟ್ರೀಯ ಶಿಕ್ಷಣ ನೀತಿ 2020 ರಡಿಯಲ್ಲಿ ನ (NEP) ಅಶೋತ್ತರಗಳಂತೆ ಬೆಂಗಳೂರು ನಗರ ವಿಶ್ವವಿದ್ಯಾನಿಲಯಕ್ಕೆ ರಾಜ್ಯದಲ್ಲಿಯೇ ಪ್ರಪ್ರಥಮ ಬಾರಿಗೆ ರಾಷ್ಟ್ರೀಯ ಶಿಕ್ಷಣ ನೀತಿ ಆಧಾರಿತ **ಬಹುಶಿಸ್ತೀಯ ವಿಶ್ವವಿದ್ಯಾನಿಲಯದ ಮಹಿಳಾ ಘಟಕ ಕಾಲೇಜನ್ನು** 2021–22ನೇ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಕರ್ನಾಟಕ ಸರ್ಕಾರ ಅನುಮತಿ ನೀಡಿರುತ್ತದೆ.

ರಾಷ್ಟ್ರೀಯ ಶಿಕ್ಷಣ ನೀತಿ–2020 ರ ಆಶಯಗಳಾದ ವಿದ್ಯಾರ್ಥಿ ಕೇಂದ್ರಿಕೃತ ಶಿಕ್ಷಣ, ಬಹುಶಿಸ್ತೀಯ ಸಮಗ್ರ ಹಾಗೂ ವಿವಿಧ ಶೈಕ್ಷಣಿಕ ಹಂತಗಳಲ್ಲಿ ಪ್ರವೇಶ ಪಡೆಯುವುದು ಮತ್ತು ನಿರ್ಗಮಿಸುವುದಕ್ಕೆ ಅವಕಾಶ ನೀಡುವ ವ್ಯಾಸಂಗವನ್ನು ನೀಡುವ ಪೂರ್ಣ ಪ್ರಮಾಣದ ಶೈಕ್ಷಣಿಕ ಸೌಕರ್ಯಗಳನ್ನು ಹೊಂದಿರುವ ಕಾಲೇಜನ್ನು ಪ್ರಾರಂಭಿಸಲಾಗುವುದು. ಪ್ರಸ್ತುತ ವರ್ಷಕ್ಕೆ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳ ಕೋರ್ಸುಗಳ ಜೊತೆಗೆ ಕೌಶಲ್ಯ ಆಧಾರಿತ, ಮೌಲ್ಯ ವರ್ಧಿತ ಸರ್ಟಿಫಿಕೇಟ್ ಮತ್ತು ಡಿಪ್ಲೋಮ ಕೋರ್ಸುಗಳನ್ನು ಸಹ ಪ್ರಾರಂಭಿಸಲು ತೀರ್ಮಾನಿಸಲಾಗಿದೆ. ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಅಭಿವೃದ್ಧಿಯಲ್ಲಿ ಇದೊಂದು ಸಾರ್ಥಕ ಅಭಿವೃದ್ಧಿ ಸಾಧನೆಯಾಗಿರುತ್ತದೆ.

ದಿನಾಂಕ: 26.08.2021 ರಂದು ಜರುಗಿದ ಸಿಂಡಿಕೇಟ್ ಸಭೆಯಲ್ಲಿ ಸರ್ಕಾರದ ಮಂಜೂರಾತಿಯನ್ನು ಸ್ವಾಗತಿಸಿ ಪ್ರಸ್ತುತ ಶೈಕ್ಷಣಿಕ ವರ್ಷದಿಂದಲೇ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ಅನುಮೋದನೆ ನೀಡಿರುತ್ತದೆ. ಬೆಂಗಳೂರು ನಗರದ ಮಲ್ಲೇಶ್ವರಂ ಬಡಾವಣೆಯ 13ನೇ ಕ್ರಾಸ್‌ನಲ್ಲಿರುವ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ನೂತನವಾಗಿ ನಿರ್ಮಿಸುತ್ತಿರುವ ಕಟ್ಟಡದಲ್ಲಿ ಕಾಲೇಜನ್ನು ಆರಂಭಿಸಲು ತೀರ್ಮಾನಿಸಲಾಗಿದೆ.

ಶೀಘ್ರದಲ್ಲಿಯೇ ವಿದ್ಯಾರ್ಥಿನಿಯರ ಪ್ರವೇಶಕ್ಕೆ ಅಧಿಸೂಚನೆ ಹೊರಡಿಸಲಾಗುವುದು. ಆಸಕ್ತ ವಿದ್ಯಾರ್ಥಿನಿಯರು ಮತ್ತು ಪಾಲಕರು ವಿಶ್ವವಿದ್ಯಾನಿಲಯದ ಈ ಮಹಿಳಾ ಮಹಾವಿದ್ಯಾಲಯದಲ್ಲಿ ಪ್ರವೇಶ ಪಡೆಯುವ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಲು ತಿಳಿಸಲಾಗಿದೆ.

# Commencement of BCU Multi-disciplinary Constituent College for Women from the academic year 2021-22.

Bengaluru, August 27 (Karnataka Information):

The Govt. of Karnataka has accorded permission to start **Multi-disciplinary Constituent College for Women from the academic year 2021-22**. The newly constructed building in the premises of Government Girls P.U. College, 13th Cross, Malleshwaram, Bengaluru is spared for starting the college for effective implementation of the New Education Policy 2020, from the academic year 2021-22.

Following the Government Order, the Syndicate of Bengaluru City University which held on 26.08.2021 has expressed its appreciation and gratitude for this and for providing a building in the heart of the city. The courses in Arts, Science and Commerce will be offered as per the National Education Policy 2020 with multiple choice and multi entreat options. In addition to the degree courses, value added, skill oriented Diploma & Certificate courses will also be offered. This is a new milestone and also a signpost in the development of the City University. The University is committed to provide the quality teaching learning resources with the required infrastructure.

The Students, Parents and General Public are requested to make use of this opportunity of providing quality education under the aegis of University.

# IISc solutions to tackle oxygen shortage

Bengaluru, August 27 (Karnataka Information):

Over the past year, researchers at the Indian Institute of Science (IISc) have been working on solutions to address the oxygen shortage due to COVID-19. Two key efforts in this direction have been the development of oxygen generation systems and oxygen concentrators.

The oxygen concentrator is an indigenous design developed by IISc researchers led by Praveen Ramamurthy, Professor in the Department of Materials Engineering. The group had already been working on oxygen concentrators since March 2020. A prototype capable of producing oxygen at more than 93% purity at 5 liters per minute (LPM) and 82% at 10 LPM was developed by August 2020 itself. The researchers then modified this prototype which now delivers more than 93±3% purity oxygen at 10 LPM within 3 minutes. The stability and performance of the system was monitored continuously for more than eight months. Clinical trials have been completed, and the system was found to perform on par with compressed oxygen cylinders.

Till date, the technology has been transferred to 24 companies, and about 35 units have been supplied to various hospitals. Recently, the Government of Karnataka issued a circular for the supply of two units each to 2,508 public health centres from the licensees.

Another solution catering to needs of the hospitals is an oxygen generation system based on technology developed by an IISc team including researchers Arashdeep Singh and Anand M Shivapuji, and led by S Dasappa, Professor at the Centre for Sustainable Technologies. The process is based on a twin-bed swing adsorption system integrated with storage and discharge vessels, and various safety systems. In one of the variants, a cylinder-filing mechanism has also been incorporated using a boost pump. The oxygen produced fulfills the

quality requirements prescribed by Indian Pharmacopeia and can be used in ICUs/CCUs/OTs and other clinical wards. Last month, the first unit based on this system was installed at the Pobbathi Medical Centre in Bengaluru.

On 15 August 2021, Prof Rangarajan, the Director of IISc, inaugurated an open-source design for a medical oxygen generation system with 50 LPM capacity. The project was generously supported by Prof Krishna Kumar, former Director of IIM Kozhikode, and the system will be installed at St Mary's Polyclinic in Lucknow. A unique feature of this system is the capability to fill about ten 47-litre cylinders at 200 bar pressure within 24 hours, apart from supplying oxygen to patient beds. Preparations are underway to ship the system to the Lucknow hospital.

IISc has also signed technology transfer agreements with four agencies from across the country for installing oxygen generation systems at various capacities (50 LPM-1000 LPM) to meet the requirements of hospitals.

## 2023ರ ವರ್ಷವನ್ನು ಇಂಟರ್ ನ್ಯಾಷನಲ್ ಇಯರ್ ಆಫ್ ಮಿಲ್ಲೆಟ್ಸ್ ಮಾಡಬೇಕು – ಸಚಿವೆ ಶೋಭಾ ಕರಂದ್ಲಾಜೆ

27ನೇ ಆಗಸ್ಟ್ ಬೆಂಗಳೂರು (ಕರ್ನಾಟಕ ಸರ್ಕಾರ)

2023ರ ವರ್ಷವನ್ನು ಇಂಟರ್ ನ್ಯಾಷನಲ್ ಇಯರ್ ಆಫ್ ಮಿಲ್ಲೆಟ್ಸ್ ಮಾಡಬೇಕೆಂಬ ಪ್ರಸ್ತಾವನೆ ಇದೆ ಎಂದು ಕೇಂದ್ರ್ರದ ಕೃಷಿ ಖಾತೆ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ಅವರು ತಿಳಿಸಿದರು.

ಇಂದು ಕೃಷಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಗಳ ಕಾರ್ಯಚಟುವಟಿಕೆ ಮತ್ತು ಕಾರ್ಯಕ್ಷಮತೆ ಪರಿಶೀಲನಾ ಸಭೆಯ ನಂತರ ವಿಕಾಸ ಸೌಧದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಕೇಂದ್ರ ಕೃಷಿ ಖಾತೆ ರಾಜ್ಯ ಸಚಿವರು, ರಾಜ್ಯದಲ್ಲಿ ಕೃಷಿಯು ಜೀವನಾಧಾರವಾಗಿರುವುದರಿಂದ ಕರ್ನಾಟಕ ರಾಜ್ಯದಲ್ಲಿ ರೈತರ ಆದಾಯವನ್ನು ದ್ವಿಗುಣಗೊಳಿಸವುದರ ಬಗ್ಗೆ ಚಿಂತಿಸಲಾಗುತ್ತಿದೆ. ಕೃಷಿ ಲಾಭದಾಯಕವಲ್ಲವೆಂದು ರೈತರು ನಗರಕ್ಕೆ ವಲಸೆ ಬರುತ್ತಿರುತ್ತಾರೆ. ಕೃಷಿಕನ ಜೀವನಕ್ಕೆ ಪ್ರಾಶಸ್ತ್ಯ ನೀಡುವಂತಹ ಹಲವಾರು ಯೋಜನೆಗಳನ್ನು ಸರ್ಕಾರವು ಹಮ್ಮಿಕೊಂಡಿದೆ ಎಂದು ತಿಳಿಸಿದರು.

ಕೃಷಿ ಮೂಲಭೂತ ಸೌಕರ್ಯ ನಿಧಿ ಅಡಿಯಲ್ಲಿ ಒಂದು ಲಕ್ಷ ಕೋಟಿ ಹೆಚ್ಚುವರಿ ಹಣವನ್ನು ಮೀಸಲಿಟ್ಟಿದ್ದು, ಇದನ್ನು ಬೆಳೆ ಕೊಯ್ಲಿನ ನಂತರ ಕೃಷಿಚಟುವಟಿಕೆಗಳಿಗೆ ಹಣವನ್ನು ತೊಡಗಿಸಲಾಗುವುದು. ಕೃಷಿಯಲ್ಲಿ ಮಿಶ್ರಬೆಳೆ ಬೆಳೆಯುತ್ತಿರುವವರ ಆದಾಯವು ದ್ವಿಗುಣವಾಗುತ್ತಿದೆ. ಆದ್ದರಿಂದ ಎಲ್ಲಾ ರಾಜ್ಯಗಳಲ್ಲೂ ಮಿಶ್ರಬೆಳೆಗೆ ಒತ್ತು ಕೊಡಲು ಕೇಂದ್ರ ಸರ್ಕಾರ ಯೋಜನೆ ಹಾಕಿ ಕೊಂಡಿದೆ ಎಂದು ಸಚಿವರು ಹೇಳಿದರು.

ಸಣ್ಣ ರೈತರನ್ನು ಒಟ್ಟುಗೂಡಿಸಲು ಕೃಷಿ ಉತ್ಪಾದಕಾ ಸಂಘಗಳನ್ನು ಮಾಡಬೇಕು. ಒಂದು ವಿಧಾನಸಭಾ ಕ್ಷೇತ್ರಕ್ಕೆ ಕನಿಷ್ಠ ಒಂದು ಕೃಷಿ ಉತ್ಪಾದಕ ಸಂಘಗಳನ್ನು ಮಾಡಬೇಕು. ನಮ್ಮ ರಾಜ್ಯದಲ್ಲಿ ಹೆಚ್ಚುವರಿ ಸಕ್ಕರೆ ಉತ್ಪಾದನೆ ಆಗುತ್ತಿದೆ. ಸಕ್ಕರೆಯಿಂದ ಇಥೆನಾಲ್ ಉತ್ಪಾದನೆ ಮಾಡಲು ಸಾಧ್ಯ. ಆದುದರಿಂದ ಕೇಂದ್ರ ಸರ್ಕಾರ ಸಕ್ಕರೆ ಉತ್ಪಾದನೆಗೆ ಆದ್ಯತೆ ಕೊಡುತ್ತಿದೆ.

2023ರ ವರ್ಷವನ್ನು ಇಂಟರ್ ನ್ಯಾಷನಲ್ ಇಯರ್ ಆಫ್ ಮಿಲ್ಲೆಟ್ಸ್ ಮಾಡಬೇಕೆಂಬ ಪ್ರಸ್ತಾವನೆ ಇದೆ. ಕರ್ನಾಟಕ ರಾಜ್ಯವು ಸಿರಿಧಾನ್ಯವನ್ನು ಬೇರೆ ದೇಶಗಳಿಗೆ ರಫ್ತು ಮಾಡುವಂತಾಗಬೇಕು. ಆಂಧ್ರ ಪ್ರದೇಶದಲ್ಲಿ ಕೃಷಿ ಭರವಸಾ ಕೇಂದ್ರವಿದ್ದು ಅದೇ ಮಾದರಿಯಲ್ಲಿ ನಮ್ಮ ಕರ್ನಾಟಕ ರಾಜ್ಯದಲ್ಲೂ ಸಹ ಮುಂದಿನ ದಿನದಲ್ಲಿ ಕೃಷಿ ಭರವಸಾ ಕೇಂದ್ರ ಸ್ಥಾಪನೆ ಮಾಡಲು ವಿಶೇಷ ಯೋಜನೆ ರೂಪಿಸಲಾಗುವುದು ಎಂದು ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ರಾಜ್ಯ ಕೃಷಿ ಸಚಿವರಾದ ಬಿ.ಸಿ. ಪಾಟೀಲ್, ತೋಟಗಾರಿಕೆ ಸಚಿವರಾದ ಮುನಿರತ್ನ, ಕ್ರೀಡಾ ಸಚಿವರಾದ ನಾರಾಯಣ ಗೌಡ ಹಾಗೂ ಕೃಷಿ ಇಲಾಖೆ ಮತ್ತು ತೋಟಗಾರಿಕಾ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸುಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 27 (ಕರ್ನಾಟಕ ವಾರ್ತೆ):

ಬೆಂಗಳೂರಿನ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿನ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ 2021–22 ನೇ ಸಾಲಿನ ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸುಗಳಿಗೆ ಆಗಸ್ಟ್ 12 ರಿಂದ ನೇರವಾಗಿ ಕಾಲೇಜಿನಲ್ಲಿ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಬಹುದಾಗಿದೆ. ಮೊದಲು ಬಂದವರಿಗೆ ಆದ್ಯತೆ ನೀಡಲಾಗುವುದು.

ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನಾಂಕವಾಗಿದೆ. ಅರ್ಜಿ ಸಲ್ಲಿಸುವವರು ಎಸ್.ಎಸ್.ಎಲ್.ಸಿ ಯಲ್ಲಿ ಕನಿಷ್ಠ ಶೇ.35% ಅಂಕ ಪಡೆದು ತೇರ್ಗಡೆ ಹೊಂದಿರಬೇಕು.

ಅಭ್ಯರ್ಥಿಗಳಿಗೆ ಲಭ್ಯವಿರುವ ಕೋರ್ಸುಗಳು Computer Science Engineering, Civil Engineering, Electronics & Communication Engineering, Mechanical Engineering ಆಗಿದ್ದು, ಸಾಮಾನ್ಯ ಹಾಗೂ 2ಬಿ ವರ್ಗದವರಿಗೆ ಪ್ರವೇಶ ಶುಲ್ಕ ರೂ.4270/–, ಎಸ್.ಸಿ/ಎಸ್.ಟಿ (ಆದಾಯ 2.5 ಲಕ್ಷದವರೆಗೆ) ರೂ.430/– ಎಸ್.ಸಿ/ಎಸ್.ಟಿ (ಆದಾಯ 2.5– 10 ಲಕ್ಷದವರೆಗೆ) ರೂ. 2535, ಪ್ರವರ್ಗ–1 (ಆದಾಯ 2.5 ಲಕ್ಷದವರೆಗೆ) ರೂ.960/–, 2ಎ/3ಎ/3ಬಿ (ಆದಾಯ 1 ಲಕ್ಷದವರೆಗೆ ) ರೂ.960/– SNQ (ಎಲ್ಲಾ ವರ್ಗದವರಿಗೆ ರೂ. 8 ಲಕ್ಷದವರೆಗೆ) ರೂ. 1330/– ನಿಗಧಿಪಡಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು ಡಾ. ಮೋಖಾ ಶೇಕು ಅವರ ಮೊಬೈಲ್ ಸಂಖ್ಯೆ: 9663876868 ಇವರನ್ನು ಸಂಪರ್ಕಿಸಬಹುದಾಗಿದೆ.

## ವಿಧಾನಸಭೆಯ ಅಧಿವೇಶನ ಆರಂಭ

ಬೆಂಗಳೂರು, ಆಗಸ್ಟ್ 27 (ಕರ್ನಾಟಕ ವಾರ್ತೆ):

ಕರ್ನಾಟಕ 15ನೇ ವಿಧಾನಸಭೆಯ ಹತ್ತನೇ ಅಧಿವೇಶನವು ಸೆಪ್ಟೆಂಬರ್ 13 ರ ಸೋಮವಾರ ಬೆಳಿಗ್ಗೆ 11.00 ಗಂಟೆಗೆ ಬೆಂಗಳೂರಿನ ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಸಮಾವೇಶಗೊಂಡು ಸೆಪ್ಟೆಂಬರ್ 24ರವರೆಗೆ ನಡೆಯಲಿದೆ ಎಂದು ಕರ್ನಾಟಕ ವಿಧಾನಸಭೆ ಕಾರ್ಯದರ್ಶಿ ಇವರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವರ ಪ್ರವಾಸ

ಬೆಂಗಳೂರು ಆಗಸ್ಟ್ 27 (ಕರ್ನಾಟಕ ವಾರ್ತೆ) :

ನಗರಾಭಿವೃದ್ಧಿ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎ.ಬಸವರಾಜ (ಬೈರತಿ) ಅವರು ಆಗಸ್ಟ್ 28ರಂದು ದಾವಣಗೆರೆ ಮತ್ತು ಹಾವೇರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಆಗಮಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಬಕಾರಿ ಸಚಿವರ ಪ್ರವಾಸ

ಬೆಂಗಳೂರು ಆಗಸ್ಟ್ 27 (ಕರ್ನಾಟಕ ವಾರ್ತೆ) :

ಅಬಕಾರಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಗೋಪಾಲಯ್ಯ ಅವರು ಆಗಸ್ಟ್ 29 ರಂದು ತುಮಕೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಆಗಮಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಅಬಕಾರಿ ಸಚಿವರ ಪ್ರವಾಸ

ಬೆಂಗಳೂರು ಆಗಸ್ಟ್ 27 (ಕರ್ನಾಟಕ ವಾರ್ತೆ) :

ಅಬಕಾರಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಗೋಪಾಲಯ್ಯ ಅವರು ಆಗಸ್ಟ್ 30 ಮತ್ತು 31 ರಂದು ತುಮಕೂರು ಮತ್ತು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು ಆಗಸ್ಟ್ 27 (ಕರ್ನಾಟಕ ವಾರ್ತೆ) :

ಕರ್ನಾಟಕ ಉಚ್ಚ ನ್ಯಾಯಾಲಯವು 142 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಅಭ್ಯರ್ಥಿಗಳು ಯಾವುದೇ ಮಾನ್ಯತೆ ಪಡೆದ ವಿಶ್ವವಿದ್ಯಾಲಯದ ವಿಜ್ಞಾನ / ಕಲೆ/ ವಾಣಿಜ್ಯ/ ವ್ಯವಹಾರ ನಿರ್ವಹಣೆ/ ಕಂಪ್ಯೂಟರ್ ಅಪ್ಲಿಕೇಶನ್ಸ್ ವಿಷಯಗಳ ಪದವಿಯಲ್ಲಿ ಸಾಮಾನ್ಯ ವರ್ಗ ಮತ್ತು ಇತರೆ ಹಿಂದುಳಿದ ಪ್ರವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ಕನಿಷ್ಠ ಶೇಕಡ 55 ರಷ್ಟು ಅಂಕಗಳನ್ನು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಕನಿಷ್ಠ ಶೇಕಡ 50 ರಷ್ಟು ಅಂಕಗಳನ್ನು ಪಡೆದಿರಬೇಕು ಮತ್ತು ಕಂಪ್ಯೂಟರ್ ನಿರ್ವಹಣಾ ಜ್ಞಾನ ಹೊಂದಿರಬೇಕು.

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಲಾದ ಕೊನೆಯ ದಿನಾಂಕದಂದು ಎಲ್ಲಾ ಪ್ರವರ್ಗದವರು 18 ವರ್ಷದವರಾಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಥವಾ ಇತರೆ ಹಿಂದುಳಿದ ಜಾತಿಗಳ ಪ್ರವರ್ಗ –1ಕ್ಕೆ ಸೇರಿದ ಪಕ್ಷದಲ್ಲಿ ಅವರು ಗರಿಷ್ಠ 40 ವರ್ಷ ವಯಸ್ಸು ಮೀರಿರಬಾರದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ '2ಎ' ಅಥವಾ '2ಬಿ' ಅಥವಾ '3ಎ' ಅಥವಾ '3ಬಿ' ಗೆ ಸೇರಿದ್ದಲ್ಲಿ ಗರಿಷ್ಠ 38 ವರ್ಷ ವಯಸ್ಸು ಮೀರಿರಬಾರದು ಹಾಗೂ ಇತರೆ ಅಭ್ಯರ್ಥಿಗಳು 35 ವರ್ಷ ಮೀರಿರಬಾರದು.

ಅಭ್ಯರ್ಥಿಯು ದೈಹಿಕ ಅಂಗವಿಕಲತೆ ಹೊಂದಿರುವ ಸಂದರ್ಭದಲ್ಲಿ ಹತ್ತು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ. ವಿಧವೆಯಾಗಿದ್ದ ಸಂದರ್ಭದಲ್ಲಿ ಹತ್ತು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

ಅಜಿ ಸಲ್ಲಿಸಲು ಸೆಪ್ಟೆಂಬರ್ 24 ಕೊನೆಯ ದಿನಾಂಕವಾಗಿದೆ. ಆನ್‌ಲೈನ್ ಅಥವಾ ಚಲನ್ ಮೂಲಕ ಶುಲ್ಕವನ್ನು ಸಂದಾಯ ಮಾಡಲು ಸೆಪ್ಟೆಂಬರ್ 27 ಕೊನೆಯ ದಿನಾಂಕವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಉಚ್ಚ ನ್ಯಾಯಾಲಯದ ವೆಬ್‌ಸೈಟ್ ವಿಳಾಸ: http://karnatakajudiciary.kar.nic.in/recritment.php ಗೆ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.